**Bangalore**
**Regional News**
**27.03.2025 / 2.30 P.M.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಒಳಮೀಸಲಾತಿ ವಿಚಾರ - ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗದಿಂದ ಸರ್ಕಾರಕ್ಕೆ ಮಧ್ಯಂತರ ವರದಿ ಸಲ್ಲಿಕೆ

೨. ಹಾಲಿನ ದರ ಏರಿಕೆಗೆ ಸಂಪುಟ ಸಭೆಯಲ್ಲಿ ಹಸಿರು ನಿಶಾನೆ

೩. ಮಂಡ್ಯ ಕೃಷಿ ವಿಶ್ವವಿದ್ಯಾಲಯದ ಹೆಸರಿನಲ್ಲಿ ರಾಜಕೀಯ ಮಾಡಲ್ಲ ; ಕೇಂದ್ರ ಸಚಿವ ಕುಮಾರಸ್ವಾಮಿ ಸ್ಪಷ್ಟನೆ

೪. ಕೇಂದ್ರ ಸರ್ಕಾರದ ಉದಾರ ರಿಯಾಯಿತಿಯಿಂದ ಸೆಮಿಕಂಡಕ್ಟರ್ ವಲಯದ ವಿಸ್ತರಣೆ ಸಾಧ್ಯ - ಕೇಂದ್ರ ಮಾಹಿತಿ ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಸ್. ಕೃಷ್ಣನ್ ಸ್ಪಷ್ಟನೆ

೫. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆ ಕೇಂದ್ರ ನಾಯಕರ ತೀರ್ಮಾನ - ಪ್ರತಿಪಕ್ಷ ನಾಯಕ ಆರ್. ಅಶೋಕ

***************

ಸರ್ಕಾರಿ ಉದ್ಯೋಗಗಳಲ್ಲಿ ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ನೀಡುವ ಕುರಿತಂತೆ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಸಮಿತಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಂದು ೧೦೪ ಪುಟಗಳ ಮಧ್ಯಂತರ ವರದಿ ಸಲ್ಲಿಸಿದೆ.

ಇದೇ ವೇಳೆ ಮಾತನಾಡಿದ ನ್ಯಾಯಮೂರ್ತಿ ನಾಗಮೋಹನ್ ದಾಸ್, ಪರಿಶಿಷ್ಟ ಜಾತಿಯ ಉದ್ಯೋಗಾಂಕ್ಷಿಗಳಿಗೆ ಅನ್ಯಾಯ ಆಗದಂತೆ ಹಾಗೂ ಅವರಿಗೆ ಶಾಶ್ವತ ಪರಿಹಾರ ನೀಡಬೇಕು ಎಂದು ತಿಳಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಜಿ. ಪರಮೇಶ್ವರ್, ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ಜಾರಿಗೆ ತರಲು ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

ಸಮಾಜಕಲ್ಯಾಣ ಸಚಿವ ಎಚ್.ಸಿ. ಮಹದೇವಪ್ಪ ಮಾತನಾಡಿ, ಸಮಿತಿಯು ಒಳ ಮೀಸಲಾತಿ ಕುರಿತು ಆರಂಭಿಕ ವರದಿ ಸಲ್ಲಿಸಿದೆ. ಇದರ ತ್ವರಿತ ಅನುಷ್ಠಾನಕ್ಕಾಗಿ ಪ್ರಸ್ತಾವನೆ ಮುಂದಿಡಲಾಗಿದೆ ಎಂದು ಸ್ಪಷ್ಟಪಡಿಸಿದರು.

ಒಳ ಮೀಸಲಾತಿ ಜಾರಿಗೆ ಬರುವವರೆಗೆ ಯಾವುದೇ ಬ್ಯಾಕ್‌ಲಾಗ್ ಹುದ್ದೆಗಳು, ಬಡ್ತಿಗಳು ಹಾಗು ಹೊಸ ನೇಮಕಾತಿಗಳನ್ನು ಮಾಡಲಾಗುವುದಿಲ್ಲ ಎಂದು ತಿಳಿಸಿದರು.

****************

ಕರ್ನಾಟಕ ಹಾಲು ಒಕ್ಕೂಟ ಹಾಗೂ ರೈತರ ಬೇಡಿಕೆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ನಂದಿನಿ ಹಾಲಿನ ಬೆಲೆಯನ್ನು ಲೀಟರ್‌ಗೆ ೩ ರಿಂದ ೪ ರೂಪಾಯಿಗೆ ಹೆಚ್ಚಿಸಲು ನಿರ್ಧರಿಸಲಾಗಿದೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಇಂದು ನಡೆದ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳುಲಾಗಿದೆ. ಲೀಟರ್‌ಗೆ ೫ ರೂಪಾಯಿ ಹೆಚ್ಚಿಸುವಂತೆ ಕೆಎಂಎಫ್ ಹಾಗೂ ರೈತ ಸಂಘಟನೆಗಳು ಸರ್ಕಾರಕ್ಕೆ ಮನವಿ ಮಾಡಿದ್ದವು.

ಸದನದಲ್ಲಿ ಪಶು ಸಂಗೋಪನಾ ಸಚಿವ ಕೆ. ವೆಂಕಟೇಶ್ ಹಾಲಿನ ದರ ಹೆಚ್ಚಳದ ಬಗ್ಗೆ ಸುಳಿವು ನೀಡಿದ್ದರು.

****************

ಮಂಡ್ಯ ಕೃಷಿ ವಿಶ್ವವಿದ್ಯಾಲಯದ ಹೆಸರಿನಲ್ಲಿ ರಾಜಕೀಯ ಮಾಡುವುದಿಲ್ಲ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಈ ಕುರಿತಂತೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಮಂಡ್ಯ ಕೃಷಿ ವಿಶ್ವವಿದ್ಯಾಲಯ ಕುರಿತು ತಮ್ಮ ವಿರುದ್ಧ ಸಂದೇಹಾತ್ಮಕ, ರಾಜಕೀಯ ದುರುದ್ದೇಶದ ಅಪಪ್ರಚಾರದ ನಡವಳಿಕೆ ದುಃಖಕರ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯಲ್ಲಿ ಕೃಷಿ ವಿಶ್ವ ವಿದ್ಯಾಲಯ ಸ್ಥಾಪನೆಯನ್ನು ಹೃದಯಪೂರ್ವಕ ಸ್ವಾಗತಿಸುವುದಾಗಿ ತಿಳಿಸಿದ ಅವರು, ಅಭಿವೃದ್ಧಿ ವಿಷಯದಲ್ಲಿ ರಾಜಕೀಯ ಮಾಡುವುದಿಲ್ಲ ಎಂದು ಹೇಳಿದ್ದಾರೆ.

ಮಂಡ್ಯ ಜನರ ಹಾಗೂ ತಮ್ಮ ನಡುವೆ ಹುಳಿ ಹಿಂಡುವ ವ್ಯರ್ಥ ಪ್ರಯತ್ನ ಬೇಡ ಎಂದು ಅಪಪ್ರಚಾರ ಮಾಡುತ್ತಿರುವವರಿಗೆ ಕಿವಿಮಾತು ಹೇಳಿದ್ದಾರೆ.

ಸಂಸದನಾಗಿ ಮಂಡ್ಯ ಜನರ ಆಶೋತ್ತರಗಳ ಈಡೇರಿಕೆಗೆ ಬದ್ಧವಾಗಿರುವುದಾಗಿ ಪುನರುಚ್ಛರಿಸಿದ್ದಾರೆ.

***************

ಸೆಮಿ ಕಂಡಕ್ಟರ್ ಮಿಷನ್ ಅಡಿಯಲ್ಲಿ ಕೇಂದ್ರ ಸರ್ಕಾರ ಕೈಗಾರಿಕೆಗಳಿಗೆ ನೀಡಿದ ಉದಾರ ರಿಯಾಯಿತಿಗಳು ಹಾಗೂ ಅನುದಾನಗಳು ಭಾರತದಲ್ಲಿ ಸೆಮಿ ಕಂಡಕ್ಟರ್ ವಲಯದ ವಿಸ್ತರಣೆಗೆ ಸಹಾಯ ಮಾಡಿದೆ ಎಂದು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಕಾರ್ಯದರ್ಶಿ ಎಸ್. ಕೃಷ್ಣನ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ನಡೆದ ಭಾರತದಲ್ಲಿ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆ ಕುರಿತಾದ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಜಾಗತಿಕ ಚಿಪ್ ಉತ್ಪಾದನೆಯಲ್ಲಿ ಭಾರತದ ಪಾತ್ರವನ್ನು ಬಲಪಡಿಸಲು ಟಾಟಾ ಎಲೆಕ್ಟ್ರಾನಿಕ್ಸ್, ಮೈಕ್ರಾನ್ಸ್, ಅದಾನಿ ಮತ್ತು ಎಲ್ ಅಂಡ್ ಟಿ ಅಂತಹ ಕಂಪನಿಗಳು ಸರ್ಕಾರದ ಬೆಂಬಲ ಪಡೆದಿವೆ ಎಂದು ಹೇಳಿದ್ದಾರೆ.

ಕೇಂದ್ರ ಸರ್ಕಾರದ ಈ ಉಪಕ್ರಮಗಳು, ವಿದೇಶಗಳಲ್ಲಿ ಅತ್ಯಾಧುನಿಕ ತಂತ್ರಜ್ಞಾನಗಳಲ್ಲಿ ಕೆಲಸ ಮಾಡುವ ಭಾರತೀಯ ಉದ್ಯೋಗಿಗಳನ್ನು ಮರಳಿ ಕರೆ ತರುವಲ್ಲಿ ಯಶಸ್ವಿಯಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಭಾರತದಲ್ಲಿ ಸೆಮಿಕಂಡಕ್ಟರ್ ವಲಯವು ೨೦೩೦ರ ವೇಳೆಗೆ ಈಗಿರುವ ೪೫ ಶತಕೋಟಿ ಡಾಲರ್‌ಗಳಿಂದ ಸುಮಾರು ೧೧೦ ಶತಕೋಟಿ ಡಾಲರ್‌ಗಳಿಗೆ ಹೆಚ್ಚಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಇದೇ ವೇಳೆ ಮಾತನಾಡಿದ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಅಭಿಷೇಕ್ ಸಿಂಗ್, ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಈ ತಂತ್ರಜ್ಞಾನಗಳು ಸಹಾಯಕವಾಗಿದೆ. ಅಲ್ಲದೆ ದೇಶದಲ್ಲಿ

ಅಭಿವೃದ್ಧಿಪಡಿಸಲಾದ ಮಣ್ಣಿನ ತೇವಾಂಶ ಪರಿಶೀಲಿಸುವ ಸಂವೇದಕಗಳು ಇಂದು ವಾಣಿಜ್ಯಾತ್ಮಕವಾಗಿಯೂ ಯಶಸ್ಸು ಸಾಧಿಸಿದೆ ಎಂದು ಹೆಮ್ಮೆ ವ್ಯಕ್ತಪಡಿಸಿದ್ದಾರೆ.

***************

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆ ಕೇಂದ್ರ ನಾಯಕರ ತೀರ್ಮಾನ ಎಂದು ಬಿಜೆಪಿ ಹಿರಿಯ ನಾಯಕ ಆರ್. ಅಶೋಕ ತಿಳಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿ ಮಾತನಾಡಿದ ಅವರು, ಕೇಂದ್ರದ ತೀರ್ಮಾನಕ್ಕೆ ತಾವೆಲ್ಲರು ಬದ್ಧರಾಗಿರುವುದಾಗಿ ಹೇಳಿದ್ದಾರೆ.

ಧ್ವನಿ : ಆರ್. ಅಶೋಕ

ಇದೇ ವೇಳೆ ರಾಜ್ಯದಲ್ಲಿ ನಡೆದಿದೆ ಎನ್ನಲಾದ ಹನಿಟ್ರ್ಯಾಪ್ ಪ್ರಕರಣದಲ್ಲಿ ಹಲವು ಕಾಂಗ್ರೆಸ್ ಮುಖಂಡರ ಕೈವಾಡವಿದೆ ಎಂದು ಅವರು ಆರೋಪಿಸಿದ್ದಾರೆ.

***************

ಅಮೃತ್ ೨.೦ ಯೋಜನೆಯಡಿಯಲ್ಲಿ ಮುಂದಿನ ೧೮ ತಿಂಗಳಲ್ಲಿ ಪ್ರತಿ ಮನೆಗೆ ಶುದ್ದ ಕುಡಿಯುವ ನೀರನ್ನು ಒದಗಿಸಲು ಯೋಜನೆ ರೂಪಿಸಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ಪಟ್ಟಣದಲ್ಲಿ ನಿನ್ನೆ ಕೇಂದ್ರ ಪುರಸ್ಕೃತ ಅಮೃತ್ ಯೋಜನೆಯಡಿಯಲ್ಲಿ, ಕುಡಿಯುವ ನೀರಿನ ಯೋಜನೆಯ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ನಗರಾಭಿವೃದ್ಧಿ ಯೋಜನೆಯಡಿಯಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ೬೦೦ ಕೋಟಿ, ತರೀಕೆರೆ ಕ್ಷೇತ್ರಕ್ಕೆ ೧೦೦ ಕೋಟಿ ಅನುದಾನ ನೀಡಲಾಗಿದ್ದು, ಕುಡಿಯುವ ನೀರಿನ ಯೋಜನೆ ಹಾಗು ಇತರೆ ಯೋಜನೆಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

***************

ಹಾಸನ ಜಿಲ್ಲೆಯಲ್ಲಿ ಕಾಡಾನೆಗಳ ಪತ್ತೆ ಹಾಗೂ ಅವುಗಳ ಚಲನವಲನದ ಮಾಹಿತಿ ಪಡೆಯಲು ರೇಡಿಯೋ ಕಾಲರ್ ಅಳವಡಿಕೆಗೆ ಅರಣ್ಯ ಇಲಾಖೆ ಮುಂದಾಗಿದೆ.

ಹಾಸನ ಜಿಲ್ಲೆ ಬೇಲೂರು ತಾಲ್ಲೂಕು ಬ್ಯಾದನೆ ಗ್ರಾಮದಲ್ಲಿ ಭುವನೇಶ್ವರಿ ಗುಂಪಿನ ಗಂಡಾನೆಗೆ ರೇಡಿಯೋ ಕಾಲರ್ ಅಳವಡಿಕೆ ಯಶಸ್ವಿಯಾಗಿದೆ.

ಮೊದಲ ದಿನವಾದ ನಿನ್ನೆ ಕಾರ್ಯಾಚರಣೆ ವಿಫಲವಾಗಿತ್ತು, ಇಂದು ನಡೆದ ಕಾರ್ಯಾಚರಣೆಯಲ್ಲಿ ಏಳು ಕುಮ್ಕಿ ಕಾಡಾನೆಗಳನ್ನು ಬಳಸಿಕೊಂಡು ರೇಡಿಯೋ ಕಾಲರ್ ಅಳವಡಿಕೆ ಮಾಡಲಾಗಿದೆ.

ಡಾ.ರಮೇಶ್ ನೇತೃತ್ವದ ತಂಡ ಕಾಡಾನೆಗೆ ಅರಿವಳಿಕೆ ಮದ್ದು ನೀಡಿದ ಬಳಿಕ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಈಟಿಎಫ್ ಸಿಬ್ಬಂದಿ ಸಹಯೋಗದಲ್ಲಿ ರೇಡಿಯೋ ಕಾಲರ್ ಅಳವಡಿಸಲಾಯಿತು.

ಸ್ಥಳೀಯರು, ಸಾರ್ವಜನಿಕರಿಗೆ ಕಾಡಾನೆಗಳ ಲೊಕೇಶನ್ ತಿಳಿಸಲು ರೇಡಿಯೋ ಕಾಲರ್ ಅಳವಡಿಕೆ ಕಾರ್ಯ ಹಮ್ಮಿಕೊಳ್ಳಲಾಗಿದೆ.

****************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕಾರಹಳ್ಳಿ ಗ್ರಾಮದ ಬಳಿಯ ಬಿಎಸ್‌ಎಫ್ ಕ್ಯಾಂಪಸ್‌ನಲ್ಲಿ ೮ ಸಾವಿರದ ೫೦೦ ಗಿಡಗಳನ್ನು ನೆಡುವುದರ ಜೊತೆಗೆ ಆ ಪ್ರದೇಶಕ್ಕೆ ಸಾಲುಮರದ ತಿಮ್ಮಕ್ಕ ವನ ಎಂದು ನಾಮಕರಣ ಮಾಡಲಾಗಿದೆ.

ಕಾರ್ಯಕ್ರಮಕ್ಕೆ ಶತಾಯುಷಿ ಸಾಲುಮರದ ತಿಮ್ಮಕ್ಕ ಇಂದು ಚಾಲನೆ ನೀಡಿದರು.

ಬಿಎಸ್‌ಎಫ್ ಕ್ಯಾಂಪಸ್‌ನಲ್ಲಿ ಈಗ ೮ ಸಾವಿರದ ೫೦೦ ಗಿಡಗಳನ್ನು ನೆಟ್ಟು ಬೆಳೆಸುವ ಅಭಿಯಾನಕ್ಕೆ ಚಾಲನೆ ದೊರೆತಿದ್ದು ಸಮಾಜ ಮುಖಿ ಸಂಸ್ಥೆಗಳ ಸಹಯೋಗ ಅತ್ಯಗತ್ಯ ಎಂದು ಬಿಎಸ್‌ಎಫ್ ಅಧಿಕಾರಿ ಡಿ.ಕೆ.ಯಾದವ್ ತಿಳಿಸಿದ್ದಾರೆ.

ಇದೇ ವೇಳೆ, ಬಿಎಸ್‌ಎಫ್ ವತಿಯಿಂದ ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕ ಅವರನ್ನು ಗೌರವಿಸಲಾಯಿತು.

****************

ಇಂದು ವಿಶ್ವ ರಂಗಭೂಮಿ ದಿನಾಚರಣೆ.  ರಂಗಭೂಮಿ ಚಟುವಟಿಕೆ ನಿರತರಿಗೂ ಒಂದು ಸ್ಮರಣೀಯ ದಿನ ಬೇಕು ಎನ್ನುವ ಕಾರಣದಿಂದಾಗಿ ೧೯೬೨ರಿಂದ ವಿಶ್ವ ರಂಗಭೂಮಿ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಶಾಂತಿಯ ಸಂಸ್ಕೃತಿಗಾಗಿ ರಂಗಭೂಮಿ ಅನ್ನುವ ಘೋಷವಾಕ್ಯದೊಂದಿಗೆ ಜಗತ್ತಿನ ಎಲ್ಲ ರಂಗಜೀವಿಗಳು ಒಟ್ಟಾಗುವ ಹಬ್ಬ ಇದಾಗಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆ ರಂಗಭೂಮಿ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದಲ್ಲಿ ಕಲಾವಿದರ ಸಂಘದ ವತಿಯಿಂದ ನಡೆದ ವಿಶ್ವ ರಂಗಭೂಮಿ ದಿನಾಚರಣೆ ಕಾರ್ಯಕ್ರಮದಲ್ಲಿ ಹಿರಿಯ ರಂಗ ಕಲಾವಿದ ಡಿ.ಕೆಂಪಣ್ಣ ಮಾತನಾಡಿ, ರಂಗಭೂಮಿ ಪರಂಪರೆಯನ್ನು ಉಳಿಸಿ ಬೆಳೆಸುವ ಕಾರ್ಯ ಮುಂದುವರೆಯಬೇಕು ಎಂದು ಹೇಳಿದ್ದಾರೆ.

ಇದೇ ವೇಳೆ ಕಲಾವಿದರಿಂದ ರಂಗ ಗೀತೆಗಳ ಗಾಯನ, ನಾಟಕ ಪ್ರದರ್ಶನ ನಡೆಯಿತು.

*******ಮುಕ್ತಾಯ********